154 ಸೆ 6 ನಿ=72 ①

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ತಳವಾರ್ ಸಾಬಣ್ಣ ಇವರ ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಲಾಗಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಮಾನ್ಯ ಉನ್ನತ ಶಿಕ್ಷಣ ಸಚಿವರಿಂದ ಉತ್ತರ:

**ವಿಷಯ:-**

ರಾಜ್ಯ ಸರ್ಕಾರದ ವಿಶ್ವವಿದ್ಯಾಲಯಗಳು ಅಧೋಗತಿಗೆ ಸಾಗುತ್ತಿರುವುದು ಮತ್ತು ಉನ್ನತ ಶಿಕ್ಷಣದ ಗುಣಮಟ್ಟ ಕುಂಠಿತಗೊಂಡಿರುವ ಕುರಿತು:

ರಾಜ್ಯದ ಗ್ರಾಮೀಣ ಭಾಗದಿಂದ ಉನ್ನತ ಶಿಕ್ಷಣ ಪಡೆಯಲು ಆಗಮಿಸುತ್ತಿರುವ ಯುವಕ/ಯುವತಿಯರಿಗೆ ದಾರಿದೀಪವಾಗಬೇಕಾಗಿದ್ದ ರಾಜ್ಯ ಸರ್ಕಾರದ ವಿಶ್ವವಿದ್ಯಾಲಯಗಳು ಗೊಂದಲದ ಗೂಡುಗಳಾಗಿ, ಸಮಸ್ಯೆಗಳ ತಾಣವಾಗಿ ಅಧೋಗತಿ ದಾರಿಗೆ ಸಾಗುತ್ತಿರುವುದು ತೀರಾ ಶೋಚನೀಯ ಸ್ಥಿತಿಯಾಗಿದೆ. ಮೂಲಭೂತ ಸೌಕರ್ಯಗಳ ಕೊರತೆ, ಪ್ರಾಧ್ಯಾಪಕರುಗಳ ಕೊರತೆ, ಜಾತಿಯತೆ, ಭ್ರಷ್ಟಾಚಾರ, ಉದ್ಯೋಗ ಮುಖಿ ಕೋರ್ಸ್‌ಗಳ ಕೊರತೆ ಹೀಗೆ ಹಲವಾರು ಸಮಸ್ಯೆಗಳಿಂದ ಬಳಲುತ್ತಿರುವ ವಿಶ್ವವಿದ್ಯಾಲಯಗಳು ಭವಿಷ್ಯ ಅರಿಸಿಕೊಂಡು ಬರುವ ಗ್ರಾಮೀಣ ಪ್ರದೇಶದ ಬಡ ಯುವಕ/ಯುವತಿಯರಿಗೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ವಿಫಲವಾಗಿವೆ. ಈ ಹಿನ್ನೆಲೆಯಲ್ಲಿ ಉನ್ನತ ಶಿಕ್ಷಣ ಸಂಸ್ಥೆಗಳ ಆಧಾರ ಸ್ತಂಭವಾಗಬೇಕಿದ್ದ ರಾಜ್ಯ ಸರ್ಕಾರದ ವಿಶ್ವವಿದ್ಯಾಲಯಗಳ ಸಮಸ್ಯೆಗಳು, ಅಧೋಗತಿ ಸ್ಥಿತಿ ಮತ್ತು ಕುಸಿಯುತ್ತಿರುವ ಗುಣಮಟ್ಟದ ಕುರಿತು ಉನ್ನತ ಶಿಕ್ಷಣ ಮಂತ್ರಿಯವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:-**

ವಿಶ್ವವಿದ್ಯಾಲಯಗಳು ಸರ್ಕಾರದ ಹಾಗೂ ಯುಜಿಸಿ ನಿಯಮಗಳನ್ವಯ ಕಾರ್ಯನಿರ್ವಹಿಸುತ್ತಿದ್ದು, ವಿಶ್ವವಿದ್ಯಾಲಯಗಳು ಮತ್ತು ಕಾಲೇಜು ಶಿಕ್ಷಣ ಇಲಾಖೆಯ ಅವಶ್ಯಕತೆ ಅನುಗುಣವಾಗಿ ಶಿಕ್ಷಣ ವಿಷಯಕ್ಕೆ ಸಂಬಂಧಿಸಿದಂತೆ ಸೂಕ್ತವಾದ ಮಾಹಿತಿ/ಮಾರ್ಗದರ್ಶನವನ್ನು ಕಾಲಕಾಲಕ್ಕೆ ನೀಡಲಾಗುತ್ತಿದ್ದು, ವಿಶ್ವವಿದ್ಯಾಲಯಗಳು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ರಡಿ ಕಾರ್ಯನಿರ್ವಹಿಸುತ್ತಿವೆ. ಶೈಕ್ಷಣಿಕ ವೇಳಾ ಪಟ್ಟಿಗೆ ಸಂಬಂಧಿಸಿದಂತೆ ಎಲ್ಲಾ ವಿಶ್ವವಿದ್ಯಾಲಯಗಳು ಮತ್ತು ಅದರ ಅಧೀನದಲ್ಲಿ ಬರುವ ಕಾಲೇಜುಗಳಲ್ಲಿ ನಿಗದಿತ ವೇಳೆಯಲ್ಲಿ ಕಾರ್ಯನಿರ್ವಹಿಸಲು/ಅನುಷ್ಠಾನಗೊಳಿಸಲು ಸೂಕ್ತ ಮಾರ್ಗದರ್ಶನ ನೀಡುತ್ತಿದೆ. ವಿಶ್ವವಿದ್ಯಾಲಯಗಳು ಅಪೇಕ್ಷಿಸುವ ಶೈಕ್ಷಣಿಕ ವಿಷಯಗಳಿಗೆ ಸಂಬಂಧಿಸಿದಂತೆ ತ್ವರಿತವಾಗಿ ಮಾರ್ಗದರ್ಶನವನ್ನು ನೀಡುತ್ತಿದೆ. ಅವಶ್ಯವಿರುವ ವಿಷಯಗಳಿಗೆ ಸಂಬಂಧಿಸಿದಂತೆ ಶಿಕ್ಷಣ ತಜ್ಞರ ಸಮಿತಿಯನ್ನು ರಚಿಸಿ ಸೂಕ್ತ ಅಭಿಪ್ರಾಯದೊಂದಿಗೆ ಅಗತ್ಯ ಕ್ರಮವಹಿಸಲು ಸೂಚಿಸಲಾಗುತ್ತಿದ್ದು, ವಿಶ್ವವಿದ್ಯಾಲಯಗಳಲ್ಲಿ ಶೈಕ್ಷಣಿಕ ವಿಷಯಕ್ಕೆ ಸಂಬಂಧಿಸಿದಂತೆ ಯಾವುದೇ ತೊಂದರೆಯಾಗುತ್ತಿರುವುದಿಲ್ಲ.

ಪ್ರಾಧ್ಯಾಪಕರುಗಳ ಕೊರತೆ ನೀಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಉದಾ: ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಪ್ರಾಂಶುಪಾಲರ ಹುದ್ದೆ ಮತ್ತು ಸಹಾಯಕ ಪ್ರಾಧ್ಯಾಪಕರುಗಳ ನೇಮಕಾತಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಕೈಗೊಂಡು ನೇಮಕಾತಿ ಪಟ್ಟಿಯನ್ನು ಪ್ರಕಟಿಸಿದ್ದು, ನೇಮಕಾತಿ ಪ್ರಕ್ರಿಯೆಯನ್ನು ಇಲಾಖೆಯು ಕೈಗೊಂಡಿರುತ್ತದೆ. ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದಂತೆ ಖಾಲಿ ಹುದ್ದೆಯನ್ನು ಭರ್ತಿ ಮಾಡುವ ದಿಸೆಯಲ್ಲಿಯೂ ಸಹ ಸೂಕ್ತ ಕ್ರಮಹಿಸಲಾಗುತ್ತಿದೆ.

...2...

ಮೂಲಭೂತ ಸೌಕರ್ಯಗಳಿಗೆ ಸಂಬಂಧಿಸಿದಂತೆ ಅಗತ್ಯ ಕ್ರಮಕೈಗೊಳ್ಳಲಾಗಿದ್ದು, ವಿಶ್ವವಿದ್ಯಾಲಯಗಳು ಮತ್ತು ಕಾಲೇಜು ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಕಾಲೇಜುಗಳಿಗೆ ಕೇಂದ್ರ ಸರ್ಕಾರದ ರೂಸಾ 1.0 & 2.0. PM USHA ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರದ ಸಹಕಾರದೊಂದಿಗೆ (Ratio 60:40) ಅನುದಾನ ಮಂಜೂರಾಗಿದ್ದು, ವಿಶೇಷವಾಗಿ ಮೂಲಭೂತ ಸೌಕರ್ಯಗಳನ್ನು ವಿಶ್ವವಿದ್ಯಾಲಯಗಳಲ್ಲಿ ಮತ್ತು ಕಾಲೇಜುಗಳಲ್ಲಿ ಹೆಚ್ಚಿಸಲು ಉಪಯೋಗಿಸಲಾಗುತ್ತಿದೆ.

ಅಂದರೆ, 2015 ರಿಂದ 2023-24 ರವರೆಗೆ ಒಟ್ಟಾರೆ ರೂ.743 ಕೋಟಿಗಳು (Central & State share) ಮಂಜೂರಾಗಿದ್ದು, ತಹಲ್‌ವರೆಗೆ ರೂ.584.13 ಕೋಟಿಗಳಷ್ಟು ಬಿಡುಗಡೆಗೊಳಿಸಲಾಗಿದೆ. (ರೂಸಾ ಅಡಿಯಲ್ಲಿ ತಹಲವರೆಗೆ ಬಿಡುಗಡೆಗೊಳಿಸಿರುವ ವಿವರಗಳ ತಖ್ತೆಃಯನ್ನು (ಅನುಬಂಧ-1 ರಲ್ಲಿ ಲಗತ್ತಿಸಿದೆ.)

ಕೇಂದ್ರ ಸರ್ಕಾರದ ಮಾರ್ಗಸೂಚಿ ಹಾಗೂ ರಾಜ್ಯ ಸರ್ಕಾರದ ನೀತಿಯಂತೆ ರಾಜ್ಯದಲ್ಲಿ ಕಲಿಕೆ ಮತ್ತು ಕೌಶಲ್ಯ, ಕಲಿಕೆ ಜೊತೆ ಕೌಶಲ್ಯ, ಮುಖ್ಯ ಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ, ಅಮೃತ ಮುನ್ನಡೆ ಹಾಗೂ Karnataka German Multi Skills Development Centre (KGMSD) ಅಡಿಯಲ್ಲಿ ಬೆಂಗಳೂರು, ಕಲಬುರುಗಿ, ಬೆಳಗಾವಿ, ಮಂಗಳೂರು, ಹುಬ್ಬಳ್ಳಿ, ಮೈಸೂರು, ಗೌರಿಬಿದನೂರು, ಕಾರ್ಕಳ ಇಲ್ಲಿ ಕಲಿಕಾ ಕೇಂದ್ರಗಳನ್ನು ಸ್ಥಾಪಿಸಲಾಗಿರುತ್ತದೆ.

ಈ ಯೋಜನೆಗಳು ಉದ್ಯೋಗಮುಖಿಯಾಗಿ ಕಾರ್ಯನಿರ್ವಹಿಸಲು ಸಹಾಯವಾಗುತ್ತಿದ್ದು, ಪ್ರಮುಖವಾಗಿ ಗ್ರಾಮೀಣ ಪ್ರದೇಶದ ಬಡ ಯುವಕ ಯುವತಿಯರಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಉದ್ಯೋಗಮುಖಿಯಾಗಿಯೂ ಸಹ ಅತ್ಯಂತ ಕಾಳಜಿಯಿಂದ ನಿರ್ವಹಿಸಲಾಗುತ್ತಿದೆ.

ಸಂಖ್ಯೆ: ಇಡಿ 53 ಅಅವಿ 2024

(ಡಾ.ಎಂ.ಸಿ ಸುಧಾಕರ್)
ಉನ್ನತ ಶಿಕ್ಷಣ ಸಚಿವರು